O.S 39/2021
PW- 1

ಸಾಕ್ಷಿಗೆ ವಿಧಿಬದ್ಧವಾಗಿ ದಿನಾಂಕ **21.06.2022** ರಂದು ಪ್ರಮಾಣ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಾದಃ ಶ್ರೀ **I.S** ವಕೀಲರಿಂದ

ನಾನು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಾನು ಕೊಟ್ಟ ಮಾಹಿತಿಯ ಮೇರೆಗೆ ವಕೀಲರು ತಯಾರಿಸಿರುತ್ತಾರೆ. ನಾನು ಅದರಲ್ಲಿರುವ ಎಲ್ಲಾ ಅಂಶಗಳನ್ನು ತಿಳಿದುಕೊಂಡು ನಂತರ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ.

ದಿನಾಂಕ 19.06.2017 ರ ಕ್ರಯ ಒಪ್ಪಂದದ ಪತ್ರವನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-1 ಎಂದು ಗುರುತಿಸಲಸಾಯಿತು.

ಸರ್ವೇ ನಂಬರ್ 159/13 ಇದಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-2 ಎಂದು ಗುರುತಿಸಲಸಾಯಿತು.

ನಾನು ನನ್ನ ವಕೀಲರ ಮೂಲಕ ಪ್ರತಿವಾದಿ ನಂಬರ್ 1 ಮತ್ತು 2 ರವರಿಗೆ ನೋಟಿಸನ್ನು ನೀಡಿರುತ್ತೆನೆ, ಅದರ ಕಛೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ಕಛೇರಿ ಪ್ರತಿಯನ್ನು ನಿಪಿ-3 ಎಂದು ಗುರುತಿಸಲಸಾಯಿತು.

2 ಪೋಸ್ಟಲ್ ರಶೀದಿಗಳನ್ನು ಹಾಗೂ 2 ಅಂಚೆ ಸ್ವೀಕೃತಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ನಿಪಿ-4 ರಿಂದ 7 ಎಂದು ಗುರುತಿಸಲಸಾಯಿತು.

ದಿನಾಂಕ 24.10.2020 ರ ಒಂದು ಲೀಗಲ್ ನೋಟಿಸ್ ನ ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-8 ಎಂದು ಗುರುತಿಸಲಸಾಯಿತು.

ದಿನಾಂಕ 20.11.2020 ರ ಒಂದು ಪ್ರತಿಯುತ್ತರ ನೋಟಿಸಿನ ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-9 ಎಂದು ಗುರುತಿಸಲಸಾಯಿತು.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲು ಮಾಡಲು ಸಮಯಾವಕಾಶ ಕೋರಿದ್ದರಿಂದ ಆಲಿಸಿ ನೀಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ

ಯಳಂದೂರು.